# ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.

## ಸಿ.ಸಿ. ಸಂಖ್ಯೆ: 620/14

**ಸಾಕ್ಷಿಯನ್ನು ದಿಃ 18.10.2022 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | | | |
|---|---|---|---|
| ಹೆಸರು | ಅಶೋಕ | ಸಿಡಬ್ಲ್ಯೂಃ 10 | ಪಿಡಬ್ಲ್ಯೂಃ 6 |
| ತಂದೆಯ ಹೆಸರು | ಸೂರಣ್ಣ | | |
| ವಯಸ್ಸು | 40 ವರ್ಷ | | |
| ಕೆಲಸ | ವ್ಯಾಪಾರಿ | | |
| ವಾಸಸ್ಥಳ | ಹುಣಸೂರು | | |

## ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ

ಈಗ ನೋಡುತ್ತಿರುವ ದಾಖಲೆ ಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ.3 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ.3 ಸಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಅಂದಾಜು 8 –9 ವರ್ಷಗಳ ಹಿಂದೆ ಪೊಲೀಸರು ಹೇಳಿದ್ದಕ್ಕೆ ಸಹಿ ಮಾಡಿದ್ದೇನೆ. ಅದರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ದಾಖಲಾತಿಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಿಪಿ4 ರಿಂದ 88 ರವರೆಗೆ ನೋಡಿದರೆ ಗುರುತಿಸಲು ಆಗುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

## ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ

ದಿಃ 02.10.2012 ರಂದು ಹುಣಸೂರು ಠಾಣೆಯಲ್ಲಿ ಚಾಸಾ–1 ರವರು ಹಾಜರುಪಡಿಸಿದ ನಿಪಿ.4 ರಿಂದ ನಿಪಿ .88 ಅನ್ನು ಪೊಲೀಸರು ಅಮಾನತ್ತು ಪಡಿಸಿಕೊಂಡು ಬೆಳಿಗ್ಗೆ 9 ರಿಂದ ರಾತ್ರಿ 8 ಗಂಟೆವರೆಗೆ ಮಹಜರ್ ಮಾಡಿ ಚಾಸಾ–1 ಹಾಗೂ 9 ರವರ ಸಮಕ್ಷಮ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರು ಇಲ್ಲವೆಂದಿದ್ದಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.

(ಶಿರಿನ್ ಜಾವೀದ್ ಅನ್ಸಾರಿ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ., ಹುಣಸೂರು.